ಕರ್ನಾಟಕ ಸರ್ಕಾರ

ಮಕ್ಕಳ ರಕ್ಷಣಾ ನಿರ್ದೇಶನಾಲಯ

C/o , ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು-01.

ಸಂ:ಕೆಎಸ್‌ಐಸಿಪಿಎಸ್/ಮರ/2020-21

ದಿನಾಂಕ:29.12.2020

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
ಎಲ್ಲಾ ಜಿಲ್ಲೆಗಳು

ಮಾನ್ಯರೇ,

ವಿಷಯ: ಎಲ್ಲಾ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿನ ಎಲ್ಲಾ ಸಿಬ್ಬಂದಿಗಳ ಹಾಗೂ ವ್ಯವಸ್ಥಾಪಕ ಮಂಡಳಿಯವರ ಪೊಲೀಸ್ ಪರಿಶೀಲನೆಯನ್ನು ಮಾಡಿಸುವ ಕುರಿತು.

*******

ವಿಷಯಕ್ಕೆ ಸಂಬಂಧಿಸಿದಂತೆ, ಮಕ್ಕಳ ಹಿತದೃಷ್ಟಿಯಿಂದ ಪ್ರಸ್ತುತ ರಾಜ್ಯದಲ್ಲಿನ ಎಲ್ಲಾ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಮತ್ತು ವ್ಯವಸ್ಥಾಪಕ ಮಂಡಳಿಯವರ ಪೊಲೀಸ್ ಪರಿಶೀಲನೆಯನ್ನು ಮಾಡಿಸುವುದು ಅತ್ಯಾವಶ್ಯಕವಾಗಿರುತ್ತದೆ.

ಆದ್ದರಿಂದ ತಮ್ಮ ತಮ್ಮ ಜಿಲ್ಲೆಗಳಲ್ಲಿನ ಎಲ್ಲಾ ನೋಂದಾಯಿಸಲ್ಪಟ್ಟ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಮತ್ತು ವ್ಯವಸ್ಥಾಪಕ ಮಂಡಳಿಯವರ ಪೊಲೀಸ್ ಪರಿಶೀಲನೆಯನ್ನು ಮಾಡಿಸಿ ಅನುಪಾಲನಾ ವರದಿಯನ್ನು ನಿರ್ದೇಶನಾಲಯಕ್ಕೆ 15 ದಿನಗಳ ಒಳಗೆ ಸಲ್ಲಿಸಲು ಸೂಚಿಸಿದೆ.

ಭವಿಷ್ಯದಲ್ಲಿ ಯಾವುದಾದರೂ ಮಕ್ಕಳ ಪಾಲನಾ ಸಂಸ್ಥೆಯ ನೋಂದಣಿ/ನವೀಕರಣಕ್ಕಾಗಿ ಪ್ರಸ್ತಾವನೆ ಸಲ್ಲಿಸಬೇಕಾದಲ್ಲಿ ಸದರಿ ಪ್ರಸ್ತಾವನೆಯೊಂದಿಗೆ ಕಡ್ಡಾಯವಾಗಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿ ಮತ್ತು ವ್ಯವಸ್ಥಾಪಕ ಮಂಡಳಿಯವರ ಪೊಲೀಸ್ ಪರಿಶೀಲನೆಯನ್ನು ಸಹಾ ಸೇರಿಸಿ ಮಾತ್ರ ಪ್ರಧಾನ ಕಛೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ,

29.12.2020

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು.

REDMI NOTE 8
AI QUAD CAMERA